<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>

<u>ಸಿ.ಸಿ. ಸಂಖ್ಯೆಃ **511/2023**</u>

<u>ಪಿರ್ಯಾದಿ</u> : ರಘು.ಎಸ್.ಆರ್, ವಯಸ್ಸು ಸುಮಾರು 40 ವರ್ಷ,
ಬಿನ್ ರಾಜೇಗೌಡ, ವಾಸಃ ಸಂಗಮಾಪುರ ಗ್ರಾಮ,
ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

ವಿರುದ್ಧ

<u>ಆರೋಪಿ</u> : ಮಧುಸೂದನ್, ವಯಸ್ಸು ಸುಮಾರು 55 ವರ್ಷ,
ಬಿನ್ ದೊಡ್ಡಯಲ್ಲಪ್ಪ,
ವಾಸಃ ಅಂತರಗಂಗೆ ಗ್ರಾಮ ಮತ್ತು ಅಂಚೆ,
ಭದ್ರಾವತಿ ತಾಲ್ಲೂಕು,
ಶಿವಮೊಗ್ಗ ಜಿಲ್ಲೆ-577 245.

<u>ಆಪಾದನೆಯ ಸಾರಾಂಶ</u>

ಶ್ರೀ ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಪಿರ್ಯಾದುದಾರರಿಗೆ ಪರಿಚಯಸ್ಥರಾಗಿದ್ದು, ದಿನಾಂಕ 05.05.2022 ರಂದು ಪಿರ್ಯಾದುದಾರರನ್ನು ಸಂಪರ್ಕಿಸಿ, ವ್ಯವಹಾರದ ಸಲುವಾಗಿ ಹಾಗೂ ನಿಮ್ಮ ಕುಟುಂಬದ ನಿರ್ವಹಣೆಗಾಗಿ ಮಾಡಿರುವ ಕೈ ಸಾಲವನ್ನು ತೀರುವಳಿ ಮಾಡುವ ಉದ್ದೇಶಕ್ಕಾಗಿ ತುರ್ತಾಗಿ ಅವರಿಂದ ಅದೇ ದಿನ 2,90,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಬಂಧನ್ ಬ್ಯಾಂಕ್, ಶಿವಮೊಗ್ಗ ಶಾಖೆಯ ಚೆಕ್ ಸಂಖ್ಯೆ 000020, ದಿನಾಂಕ 27.10.2022, ರೂ.2,90,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ, ಮೂಡಿಗೆರೆ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ (Funds Insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 06.01.2023 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ **138** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

*(ದಿನಾಂಕ 17.10.2025 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)*

**Sd/-**

ಮೂಡಿಗೆರೆ
ದಿನಾಂಕಃ 17.10.2025

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
**ಜೆ.ಎಂ.ಎಫ್.ಸಿ, ಮೂಡಿಗೆರೆ.**